**ಕರ್ನಾಟಕ ಸರ್ಕಾರ**

ಸಂ.ಹಿಂವಕನಿ/ಡಿಬಿಟಿ/ಸಿಆರ್-12/2013-14

ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ನಂ.16-ಡಿ, 3ನೇ ಮಹಡಿ, ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ,
ಬೆಂಗಳೂರು-52, ದಿನಾಂಕ: 18.03.2014

**ಡಿ.ಬಿ.ಟಿ ಸುತ್ತೋಲೆ-12**

**"ಅತೀ ತುರ್ತು"**

**ವಿಷಯ: ಊಟ ಮತ್ತು ವಸತಿ ಸಹಾಯ ಯೋಜನೆ, ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಮತ್ತು ಶುಲ್ಕ ವಿನಾಯಿತಿ ಕಾರ್ಯಕ್ರಮಗಳಡಿ, ಅರ್ಹರಿದ್ದು, ತಿರಸ್ಕರಿಸಿರುವ ವಿದ್ಯಾರ್ಥಿಗಳ ಅರ್ಜಿಗಳ ಮರುಪರಿಶೀಲನೆ ಮಾಡುವ ಬಗ್ಗೆ.**

*****

1. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ,
    1) ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ
    2) ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಮತ್ತು
    3) ಶುಲ್ಕ ವಿನಾಯಿತಿ

    – ಕಾರ್ಯಕ್ರಮಗಳಿಗೆ ಪ್ರಥಮ ಬಾರಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆದು, ಅರ್ಹ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಮೊತ್ತವನ್ನು ಜಮಾ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

2. ಈ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಸರ್ಕಾರದ ಆದೇಶಗಳನ್ನು ಸೆಪ್ಟೆಂಬರ್ 2013ರಂದು ಹೊರಡಿಸಲಾಗಿದ್ದು, ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶವನ್ನು ನೀಡಲಾಗಿದೆ.

3. ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಗಳನ್ನು ಕಾಲೇಜಿನ ಪ್ರಾಂಶುಪಾಲರು, ಪರಿಶೀಲನಾಧಿಕಾರಿ, ತಾಲ್ಲೂಕುಮಟ್ಟದ ಅಧಿಕಾರಿ ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಪರಿಶೀಲನೆ ಮಾಡಿರುತ್ತಾರೆ.

4. ಈ ಪರಿಶೀಲನೆಯ ವರದಿಗಳ ಆಧಾರದ ಮೇಲೆ ಆಂಧ್ರಪ್ರದೇಶ ಸರ್ಕಾರ ಅಭಿವೃದ್ಧಿಪಡಿಸಿರುವ ತಂತ್ರಾಂಶವನ್ನು (ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆಯ ಸೂಚನೆಯಂತೆ) ಅಳವಡಿಸಿಕೊಳ್ಳಲಾಗಿದ್ದು, ಈ ತಂತ್ರಾಂಶದ ಮೂಲಕ ಕಾರ್ಯಕ್ರಮವಾರು ಅರ್ಹ ವಿದ್ಯಾರ್ಥಿಗಳ ಪಟ್ಟಿಗಳನ್ನು, ಮಂಜೂರಾತಿ ಆದೇಶಗಳನ್ನು ಮತ್ತು ಬಿಲ್ಲುಗಳನ್ನು ಸಿದ್ಧಪಡಿಸಿ, ಖಜಾನೆಗಳಿಗೆ ಸಲ್ಲಿಸುವಂತೆ ನಿಮಗೆ ಸೂಚಿಸಲಾಗಿತ್ತು.

5. ಖಜಾನೆಗಳಿಗೆ ಸಲ್ಲಿಸಿದ ಬಿಲ್ಲುಗಳಿಗೆ ಸಂಬಂಧಿಸಿದಂತೆ, ಖಜಾನೆಗಳಿಂದ ಪಡೆದ ಚೆಕ್‌ಗಳನ್ನು ನಿಗದಿತ ಬ್ಯಾಂಕ್‌ಗಳಿಗೆ ನೀಡಿ, ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ ಅರ್ಹ ಮೊತ್ತವನ್ನು ಜಮಾ ಮಾಡುವಂತೆ ಸೂಚಿಸಲಾಗಿತ್ತು.

6. **ಆದರೆ, ಕೆಲವು ವಿದ್ಯಾರ್ಥಿಗಳು ಲಿಖಿತ ಮತ್ತು ದೂರವಾಣಿಯ ಮೂಲಕ ಮನವಿಗಳನ್ನು ಸಲ್ಲಿಸಿ, ಮಂಜೂರಾತಿಗೆ ಪರಿಗಣಿಸಿರುವ ವಿದ್ಯಾರ್ಥಿಗಳಿಗಿಂತ ಹೆಚ್ಚಿನ ಅಂಕಗಳನ್ನು ಪಡೆದುಕೊಂಡಿದ್ದರೂ ಸಹ ಹಾಗೂ ಇತರೆ ಎಲ್ಲಾ ರೀತಿಯಲ್ಲಿ ಅರ್ಹರಿದ್ದರೂ ಸಹ ತಮಗೆ ಈ ಸೌಲಭ್ಯಗಳನ್ನು ಮಂಜೂರು ಮಾಡಿರುವುದಿಲ್ಲವೆಂದು ತಿಳಿಸಿರುತ್ತಾರೆ.**

7. ಆದಕಾರಣ, ಈ ಮೇಲಿನ ಮೂರೂ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಈ ಕೆಳಗಿನಂತೆ ಕೂಡಲೇ ಕ್ರಮ ತೆಗೆದುಕೊಳ್ಳಲು ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಲಾಗಿದೆ.

ಅ) ಒಂದು ಕಾರ್ಯಕ್ರಮದಡಿ, ಈಗಾಗಲೇ ಮಂಜೂರಾತಿ ಮಾಡಲಾಗಿರುವ ವಿದ್ಯಾರ್ಥಿಗಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಹಾಗೂ ಇತರೆ ಎಲ್ಲಾ ರೀತಿಯಿಂದಲೂ ಅರ್ಹರಿರುವ ಆದರೆ, ವಿವಿಧ ಹಂತಗಳಲ್ಲಿ ತಿರಸ್ಕರಿಸಿರುವ ಅರ್ಜಿಗಳನ್ನು ಆನ್‌ಲೈನ್ ಮೂಲಕ ಕೂಡಲೇ **ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ವತಃ ಪರಿಶೀಲನೆ ಮಾಡಿ,** ಕಾರ್ಯಕ್ರಮವಾರು ಪಟ್ಟಿಗಳನ್ನು ಸಿದ್ಧಪಡಿಸಿ, ಆನ್‌ಲೈನ್ ಮೂಲಕ ಈ ಕಛೇರಿಗೆ ಸಲ್ಲಿಸಬೇಕು. **(ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳನ್ನೂ ಒಳಗೊಂಡಂತೆ)**

**ಆ) ಅಂಕಗಳ ಪರಿಗಣನೆಗಾಗಿ – ಈ ಮೇಲಿನ ಮೂರೂ ಕಾರ್ಯಕ್ರಮಗಳಿಗೆ ಆಯಾ ಜಿಲ್ಲೆಯನ್ನು ಒಂದು ಘಟಕವನ್ನಾಗಿ ಪರಿಗಣಿಸಬೇಕು.**

ಇ) ಎಷ್ಟು ವಿದ್ಯಾರ್ಥಿಗಳು ಯಾವ ಕಾರ್ಯಕ್ರಮದಡಿ ಈ ಮೇಲಿನಂತೆ ಸೌಲಭ್ಯಕ್ಕೆ ಅರ್ಹರಿರುತ್ತಾರೆ ಎಂಬ ಬಗ್ಗೆ ಹಾಗೂ ಇವರಿಗೆ ಸೌಲಭ್ಯಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದ ಅನುಮತಿಯನ್ನು ಪಡೆದು, ನಂತರ ತಮಗೆ ಅಗತ್ಯ ಸೂಚನೆಗಳನ್ನು ನೀಡಲಾಗುವುದು.

ಈ) ಆರ್ಥಿಕ ವರ್ಷ ಕೆಲವೇ ದಿನಗಳಲ್ಲಿ ಪೂರ್ಣಗೊಳ್ಳಲಿದ್ದು, ಈ ಸಂಬಂಧ, ಅತ್ಯಂತ ತುರ್ತಾಗಿ ಕ್ರಮ ಜರುಗಿಸಬೇಕಾಗಿರುವುದರಿಂದ, ವಿಳಂಬವಾಗದಂತೆ ಈ ಮಾಹಿತಿಯನ್ನು ಈ ಕಛೇರಿಗೆ ಆನ್‌ಲೈನ್ ಮೂಲಕ ಹಾಗೂ ಮುದ್ದಾಂ **ದಿನಾಂಕ 22.03.2014 ರ ಒಳಗಾಗಿ** ಸಲ್ಲಿಸಲು ಸೂಚಿಸಿದೆ.

**(ಈ ಹಿಂದೆಯೇ ತಿಳಿಸಿರುವಂತೆ, ಈ ಇಲಾಖೆಯಿಂದ ಜಾರಿಗೊಳಿಸುತ್ತಿರುವ ಈ ಮೇಲಿನ ಕಾರ್ಯಕ್ರಮಗಳಿಗೆ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ.)**

**ಆಯುಕ್ತರು** 18/3/14
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು.**

**ಇವರಿಗೆ:**

ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ – ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೂಲಕ.
3. ಜಂಟಿ ನಿರ್ದೇಶಕರು (ವಸತಿನಿಲಯ), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಉಪ ನಿರ್ದೇಶಕರು (ವಸತಿನಿಲಯ), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ರಾಜ್ಯದ ಎಲ್ಲಾ ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳಿಗೆ – ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೂಲಕ.
6. ಲೆಕ್ಕಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ಡಿ.ಬಿ.ಟಿ ಮತ್ತು ವಿದ್ಯಾರ್ಥಿವೇತನ ಶಾಖೆಗಳ ಪ್ರತಿ.

**E:\Letter-3.docx**